# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 595 |
| 2 | ಸದಸ್ಯರ ಹೆಸರು | : | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | : | 11-12-2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಪೊಲೀಸ್ ಇಲಾಖೆಯಲ್ಲಿ 30 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, ಕಳೆದ 6 ವರ್ಷಗಳಿಂದ ಎಎಸ್‌ಐ (civil) ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಪಿಎಸ್‌ಐ ಹುದ್ದೆಗೆ ಮುಂಬಡ್ತಿ ನೀಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; | ಬೆಂಗಳೂರು ನಗರ ಪೊಲೀಸ್ ಆಯುಕ್ತಾಲಯದ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಎಸ್‌ಐ ರವರುಗಳಿಗೆ ಪಿಎಸ್‌ಐ ಮುಂಬಡ್ತಿ ಹುದ್ದೆಯ ರಿಕ್ತಸ್ಥಾನದ ಅನುಗುಣವಾಗಿ ಜೇಷ್ಠತೆಯ ಆಧಾರದ ಮೇಲೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕನಿಷ್ಟ 4 ವರ್ಷಗಳ ಸೇವೆಯನ್ನು ಪೂರೈಸಿರುವ ಅರ್ಹ ಎಎಸ್‌ಐ ರವರಿಗೆ ಮುಂಬಡ್ತಿ ನೀಡಲಾಗುತ್ತಿರುತ್ತದೆ.<br><br>ಪ್ರಸ್ತುತ ಸುಮಾರು 29 ವರ್ಷಗಳು ಇಲಾಖೆಯಲ್ಲಿ ಸೇವೆ ಸಲ್ಲಿಸಿ ಹಾಗೂ ಎಎಸ್‌ಐ ಹುದ್ದೆಯಲ್ಲಿ 5 ವರ್ಷ 10 ತಿಂಗಳು ಸೇವೆಯನ್ನು ಪೂರೈಸಿರುವ ಎಎಸ್‌ಐ ರವರುಗಳಿಗೆ ಮುಂಬಡ್ತಿ ಪರಿಗಣಿಸಲಾಗಿದ್ದು, ಮುಂಬಡ್ತಿ ನೀಡಲಾಗುತ್ತಿರುತ್ತದೆ. |
| ಆ) | ರಾಜ್ಯದ ಬೇರೆ ಬೇರೆ ಸರ್ಕಾರಿ ಇಲಾಖೆಗಳ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳು ಶೇಕಡ 50:50 ಅನುಪಾತದಲ್ಲಿದ್ದು, ಪೊಲೀಸ್ ಇಲಾಖೆಯಲ್ಲಿ ಮಾತ್ರ 70:30 ಅನುಪಾತದಲ್ಲಿರುವುದರಿಂದ ಈ ತಾರತಮ್ಯವನ್ನು ಸರಿಪಡಿಸಲಾಗುವುದೇ; ಹಾಗೂ ನಿರ್ದಿಷ್ಟ ಕಾಲಮಿತಿಯೊಳಗೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುವುದೇ? | ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಪಿ.ಎಸ್.ಐ (ಸಿವಿಲ್) ಹುದ್ದೆಯು ಪ್ರಮುಖ ಹುದ್ದೆಯಾಗಿದ್ದು, ಸಂಬಂಧಪಟ್ಟ ಠಾಣಾ ವ್ಯಾಪ್ತಿಯ ಸಂಪೂರ್ಣ ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯು ಇವರ ಮುಖ್ಯ ಕರ್ತವ್ಯವಾಗಿರುತ್ತದೆ. ಈ ಕರ್ತವ್ಯಗಳನ್ನು ನಿರ್ವಹಿಸಲು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾದ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಯುವ ಅಧಿಕಾರಿಗಳ ಅವಶ್ಯಕತೆ ಇರುತ್ತದೆ. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುತ್ತದೆ.<br><br>ಸಾಮಾನ್ಯವಾಗಿ ಪೊಲೀಸ್ ಕಾನ್ಸ್‌ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್‌ಐ ಹುದ್ದೆಗಳಿಗೆ 02 ಮುಂಬಡ್ತಿಯನ್ನು ಹೊಂದಿ ನಂತರ ಪಿ.ಎಸ್.ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. |

| | | |
|---|---|---|
| | | ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಟ ಮಟ್ಟದ್ದಾಗಿರುವುದರಿಂದ ಪ್ರಸ್ತುತ ವರದಿಯಾಗುತ್ತಿರುವ ಹೆಚ್ಚಿನ ತಾಂತ್ರಿಕತೆ ಇರುವ ಅಪರಾಧ ಪ್ರಕರಣ ಭೇದಿಸುವುದು ಕಷ್ಟಸಾಧ್ಯವಾಗಿರುತ್ತದೆ.<br><br>ಪೊಲೀಸ್ ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಇತರ ಇಲಾಖೆಗಳ ಕಾರ್ಯನಿರ್ವಹಣೆಗೂ ಸಾಕಷ್ಟು ವ್ಯತ್ಯಾಸವಿರುವುದರಿಂದ ಪೊಲೀಸ್ ಇಲಾಖೆಯ ಪಿಎಸ್‌ಐ ಹುದ್ದೆಯನ್ನು ಇತರ ಇಲಾಖೆಯ ಹುದ್ದೆಗಳೊಂದಿಗೆ ಹೋಲಿಸುವುದು ಸೂಕ್ತವಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪಿಎಸ್‌ಐ ಹುದ್ದೆಗೆ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡ 70:30ರ ಅನುಪಾತವನ್ನು ನಿಗದಿಪಡಿಸಲಾಗಿದ್ದು, ಸದರಿ ಅನುಪಾತ ನಿಗದಿಯು ಇಲಾಖೆಯ ಕಾರ್ಯನಿರ್ವಹಣೆ ಮತ್ತು ಆಡಳಿತಕ್ಕೆ ಪೂರಕವಾಗಿದ್ದು, ಸದರಿ ಅನುಪಾತ ನಿಗದಿಯಲ್ಲಿ ಯಾವುದೇ ತಾರತಮ್ಯವಿರುವುದಿಲ್ಲ. |

ಸಂಖ್ಯೆ: ಒಇ 350 ಪಿಇಐ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು